**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** 2016-17ನೇ ಸಾಲಿನಲ್ಲಿ SCP, TSP ಅನುದಾನದಲ್ಲಿ ರಾಜ್ಯದ ಗ್ರಾಮೀಣ ಜನವಸತಿಗಳಲ್ಲಿನ SC/ST Colonyಗಳಲ್ಲಿ **1129** ನೀರು ಶುದ್ಧೀಕರಣ ಘಟಕಗಳನ್ನು ಕೆ.ಆರ್.ಐ.ಡಿ.ಎಲ್.ಸಂಸ್ಥೆ ಮುಖೇನ ಅನುಷ್ಠಾನಗೊಳಿಸಲು ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:**

1. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆರವರ ಪ್ರಸ್ತಾವನೆ ಸಂಖ್ಯೆ: ಗ್ರಾಅಪ/1213/ ಗ್ರಾಕುನೀ&ನೈಇ/2016, ದಿನಾಂಕ:05.01.2017
2. ಆರ್ಥಿಕ ಇಲಾಖೆ ಆದೇಶ ಸಂ:ಆಇ/3/ಟಿಎಫ್‌ಪಿ/2016, ಬೆಂಗಳೂರು. ದಿ:02-04-2016
3. ದಿನಾಂಕ:15.07.2016ರಂದು ಸನ್ಮಾನ್ಯ ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ಕರ್ನಾಟಕ ಅನುಸೂಚಿತ ಜಾತಿಗಳ ಉಪ ಯೋಜನೆ ಅಧಿನಿಯಮ-2013ರ ಪ್ರಕಾರ ರಾಜ್ಯ ಅನುಸೂಚಿತ ಜಾತಿಗಳು/ಅನುಸೂಚಿತ ಪಂಗಡಗಳ ಅಭಿವೃದ್ಧಿ ಪರಿಷತ್‌ನ ಸಭೆಯ ನಡವಳಿಗಳು
4. ದಿನಾಂಕ:25.10.2016ರಂದು SCP/TSP ನೋಡಲ್ ಏಜನ್ಸಿ ಅಧ್ಯಕ್ಷರು ಮತ್ತು ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಅಧ್ಯಕ್ಷತೆಯಲ್ಲಿ 2016-17ನೇ ಸಾಲಿನ SCP/TSP ಉಪಯೋಜನೆಯಡಿಯಲ್ಲಿ ಸೆಪ್ಟಂಬರ್ 2016ರ ಅಂತ್ಯಕ್ಕೆ ವಿವಿಧ ಇಲಾಖೆಗಳು ಸಾಧಿಸದ ಪ್ರಗತಿ ಪರಿಶೀಲನೆಯ ಸಭೆ ನಡವಳಿಗಳು
5. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆರವರ ಅ.ಸ.ಪತ್ರ ಸಂಖ್ಯೆ: ಗ್ರಾಅಪ/28/ಯೋಉಮಾ/2016, ದಿನಾಂಕ:19.09.2016
6. ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ 17 ಗ್ರಾನೀಸ(8)2016, ದಿನಾಂಕ:23.09.2016

*****

**ಪೀಠಿಕೆ:**

ಮೇಲೆ (2)ರಲ್ಲಿ ಓದಲಾದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಡಿ 2014-15ನೇ ಸಾಲಿನಲ್ಲಿ **ಎಸ್.ಸಿ.ಪಿ. ಅನುದಾನದಡಿ ರೂ.213.74ಕೋಟಿಗಳು** ಹಾಗೂ **ಟಿ.ಎಸ್.ಪಿ. ಅನುದಾನದಡಿ ರೂ.80.37ಕೋಟಿಗಳು** ಒಟ್ಟು **ರೂ.294.11ಕೋಟಿಗಳ** ಅನುದಾನ ಬಳಕೆಯಾಗದೆ ಉಳಿದಿರುತ್ತದೆ. ಸದರಿ ಅನುದಾನದಲ್ಲಿ 2016-17ನೇ ಸಾಲಿನಲ್ಲಿ ರಾಜ್ಯದ ಗ್ರಾಮೀಣ ಜನವಸತಿಗಳಲ್ಲಿನ SC Colonyಗಳಲ್ಲಿ ಮತ್ತು ST Colonyಗಳಲ್ಲಿ ಜನಸಂಖ್ಯೆಯ ಅಗತ್ಯತೆಗನುಗುಣವಾಗಿ ನೀರು ಶುದ್ಧೀಕರಣ ಘಟಕಗಳನ್ನು ಅಳವಡಿಸಿ ಶುದ್ಧ ಕುಡಿಯುವ ನೀರನ್ನು ಪೂರೈಕೆ ಮಾಡಲು ಮೇಲೆ (3)ರಲ್ಲಿ ಓದಲಾದ ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯ ಮಂತ್ರಿ ಪರಿಷತ್‌ನಲ್ಲಿ ತೀರ್ಮಾನಿಸಿದ್ದು, ಸಮಾಜ ಕಲ್ಯಾಣ ಇಲಾಖೆಯು ಒಪ್ಪಿಗೆ ಸೂಚಿಸಿರುತ್ತಾರೆ.

ಮೇಲೆ (1)ರಲ್ಲಿ ಓದಲಾದ ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆರವರ ಪ್ರಸ್ತಾವನೆಯನ್ವಯ ರಾಜ್ಯದ ಗ್ರಾಮೀಣ ಜನವಸತಿಗಳಲ್ಲಿನ SC Colony ಗಳಲ್ಲಿ ಮತ್ತು ST Colonyಗಳಲ್ಲಿ SCP ಅನುದಾನದಲ್ಲಿ 858 ನೀರು ಶುದ್ಧೀಕರಣ ಘಟಕಗಳು ಹಾಗೂ TSP ಅನುದಾನದಲ್ಲಿ 271 ನೀರು ಶುದ್ಧೀಕರಣ ಘಟಕಗಳನ್ನು ಜನಸಂಖ್ಯೆಯ ಅಗತ್ಯತೆಗನುಗುಣವಾಗಿ ಸಾಮಾನ್ಯ ಮಾದರಿಯ **(Regular model)** 1000*LPH* ಸಾಮರ್ಥ್ಯದ ನೀರು ಶುದ್ಧೀಕರಣ ಘಟಕಗಳನ್ನು **"ಕೆ.ಆರ್.ಐ.ಡಿ.ಎಲ್.ಸಂಸ್ಥೆ ಮುಖೇನ"** ಅಳವಡಿಸಿ ಶುದ್ಧ ಕುಡಿಯುವ ನೀರನ್ನು ಪೂರೈಸಿ ಜನರ ಆರೋಗ್ಯದ ಹಿತರಕ್ಷಣೆಯನ್ನು ಕಾಪಾಡಲು ಆದೇಶ ಹೊರಡಿಸಲು ಸರ್ಕಾರ ನಿರ್ಧರಿಸಿದೆ. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: RDP/1213/RDW&SD/2016-17, ದಿನಾಂಕ:06.01.2017.**

ಪೀಠಿಕೆಯಲ್ಲಿನ ಪ್ರಸ್ತಾವನೆಯನ್ನು ಪರಿಶೀಲಿಸಿ, 2016-17ನೇ ಸಾಲಿನಲ್ಲಿ ರಾಜ್ಯದ ಗ್ರಾಮೀಣ ಜನವಸತಿಗಳಲ್ಲಿನ SC/ST Colony ಗಳಲ್ಲಿ SCP ಅನುದಾನದಲ್ಲಿ 858 ನೀರು ಶುದ್ಧೀಕರಣ ಘಟಕಗಳು ಹಾಗೂ TSP ಅನುದಾನದಲ್ಲಿ 271 ನೀರು ಶುದ್ಧೀಕರಣ ಘಟಕಗಳನ್ನು ಜನಸಂಖ್ಯೆಯ ಅಗತ್ಯತೆಗನುಗುಣವಾಗಿ ಸಾಮಾನ್ಯ ಮಾದರಿಯ (Regular model) 1000*LPH* ಸಾಮರ್ಥ್ಯದ ನೀರು ಶುದ್ಧೀಕರಣ ಘಟಕಗಳನ್ನು ಕೆ.ಆರ್.ಐ.ಡಿ.ಎಲ್.ಸಂಸ್ಥೆ ಮುಖೇನ ಈ ಕೆಳಕಂಡ ಮಾನದಂಡಗಳನ್ವಯ ಅಳವಡಿಸಲು ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

1. **ಈ ಆದೇಶದೊಂದಿಗೆ ಲಗತ್ತಿಸಿರುವ ಅನುಬಂಧ-Iರಲ್ಲಿ ಅನುಮೋದಿಸಲ್ಪಟ್ಟ 1129 ಗ್ರಾಮೀಣ ಜನವಸತಿಗಳ ಪೈಕಿ ಕಡ್ಡಾಯವಾಗಿ SC Colony ಗಳಲ್ಲಿ 858 ನೀರು ಶುದ್ಧೀಕರಣ ಘಟಕಗಳನ್ನು ಮತ್ತು ಕಡ್ಡಾಯವಾಗಿ ST Colony ಗಳಲ್ಲಿ 271 ನೀರು ಶುದ್ಧೀಕರಣ ಘಟಕಗಳನ್ನು ಅಳವಡಿಸಲು ಕ್ರಮವಹಿಸತಕ್ಕದ್ದು.**

2. ಸದರಿ ಗ್ರಾಮೀಣ ಜನವಸತಿಗಳಲ್ಲಿನ SC/ST Colony ಗಳಲ್ಲಿ ನೀರು ಶುದ್ಧೀಕರಣ ಘಟಕಗಳನ್ನು ಅಳವಡಿಸಲು ಗ್ರಾ.ಕು.ನೀ.&ನೈ.ಇಲಾಖೆಯಿಂದ ನೀಡಲಾಗುವ ಆಧುನಿಕ ತಾಂತ್ರಿಕ ವಿವರಣೆ (Technical Specification) ಯನ್ನೊಳಗೊಂಡ, ಸ್ವಯಂಚಾಲಿತ (Fully Automated) ಘಟಕಗಳಿಗೆ ಎಷ್ಟು ವೆಚ್ಚ / ಅನುದಾನ ತಗಲಬಹುದು ಎಂಬ ಮಾಹಿತಿಯ ಮಾದರಿ ಅಂದಾಜು ಪತ್ರಿಕೆಯನ್ನು (Estimated cost) ತಯಾರಿಸಿ, ಗ್ರಾ.ಕು.ನೀ.&ನೈ.ಇಲಾಖೆಯಿಂದ ಅನುಮೋದನೆ ಪಡೆಯುವುದು ಹಾಗೂ ಕೆ.ಆರ್.ಐ.ಡಿ.ಎಲ್.ಸಂಸ್ಥೆರವರು ಕ್ಷೇತ್ರಮಟ್ಟದಲ್ಲಿ ನೀರು ಶುದ್ಧೀಕರಣ ಘಟಕಗಳನ್ನು ಅಳವಡಿಸಲು ಎಲ್ಲಾ ಅಗತ್ಯ ಕ್ರಮಗಳನ್ನು ಕೈಗೊಂಡು ತುರ್ತಾಗಿ ಅನುಷ್ಠಾನಗೊಳಿಸುವುದು.

3. ಅನುಮೋದಿತ ತಂತ್ರಜ್ಞಾನದ ನೀರು ಶುದ್ಧೀಕರಣ ಘಟಕಗಳನ್ನು ಸ್ಥಳೀಯ ಜನಸಂಖ್ಯೆಗೆ ಅನುಗುಣವಾಗಿ, ಸಾಮಾನ್ಯ ಮಾದರಿಯ 1000*LPH* ಸಾಮರ್ಥ್ಯದ ನೀರು ಶುದ್ಧೀಕರಣ ಘಟಕಗಳನ್ನು ಅಳವಡಿಸಿಕೊಳ್ಳಲು ಕೆ.ಆರ್.ಐ.ಡಿ.ಎಲ್.ಸಂಸ್ಥೆಯು ಕ್ರಮವಹಿಸುವುದು.

4. ಸದರಿ ನೀರು ಶುದ್ಧೀಕರಣ ಘಟಕಗಳನ್ನು ಅಳವಡಿಸಲು ಅವಶ್ಯವಿರುವ ನಿವೇಶನ, ವಿದ್ಯುತ್ ಸಂಪರ್ಕ ಮತ್ತು ಜಲಮೂಲಗಳನ್ನು ಸಂಬಂಧ ಪಟ್ಟ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಸ್ಥಳೀಯ ಗ್ರಾಮ ಪಂಚಾಯಿತಿ ಮೂಲಕ ಹಸ್ತಾಂತರಿಸಲು ಕ್ರಮವಹಿಸುವುದು. ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಕಾರ್ಯಪಾಲಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಅಧಿಕಾರಿಗಳು ಹಾಗೂ ಗ್ರಾಮ ಪಂಚಾಯಿತಿಗಳೊಂದಿಗೆ ಸಮನ್ವಯ ಸಾಧಿಸಿ ಕ್ರಮವಹಿಸತಕ್ಕದ್ದು.

5. ನೀರು ಶುದ್ಧೀಕರಣ ಘಟಕಗಳಿಗೆ ಕಚ್ಚಾನೀರು ಒದಗಿಸುವ ಪೈಪ್‌ಲೈನ್ ಮತ್ತು ಅವಶ್ಯವಿದ್ದಲ್ಲಿ ವಿದ್ಯುತ್ ಸಂಪರ್ಕ ಕಲ್ಪಿಸಲು ಹೆಚ್ಚುವರಿ ಕಂಬ / ಲೈನ್‌ಗಳನ್ನು ಸ್ಥಳೀಯ ಗ್ರಾಮ ಪಂಚಾಯಿತಿಯು ಒದಗಿಸತಕದ್ದು, ಒಂದು ವೇಳೆ ಸದರಿ ಕಾಮಗಾರಿಗಳನ್ನು ಕೆ.ಆರ್.ಐ.ಡಿ.ಎಲ್.ಸಂಸ್ಥೆಯು ನಿರ್ವಹಿಸಿದಲ್ಲಿ ಈ ಸಂಬಂಧದ ಹೆಚ್ಚುವರಿ ವೆಚ್ಚವನ್ನು ಕೆ.ಆರ್.ಐ.ಡಿ.ಎಲ್.ಸಂಸ್ಥೆಗೆ ಗ್ರಾ.ಕು.ನೀ.&ನೈ.ಇಲಾಖೆಯು ನೇರವಾಗಿ ಭರಿಸತಕ್ಕದ್ದು. ಇದಕ್ಕೆ ಸಂಬಂಧಪಟ್ಟ ಹೊಂದಾಣಿಕೆಯ ಮೊತ್ತದ ಪ್ರಸ್ತಾವನೆಯನ್ನು ಕೆ.ಆರ್.ಐ.ಡಿ.ಎಲ್.ಸಂಸ್ಥೆಯು ಗ್ರಾ.ಕು.ನೀ.&ನೈ.ಇಲಾಖೆರವರಿಗೆ ಸಲ್ಲಿಸಲು ಕ್ರಮವಹಿಸುವುದು.

6. ಸದರಿ ನೀರು ಶುದ್ಧೀಕರಣ ಘಟಕಗಳನ್ನು ಅನುಷ್ಠಾನಗೊಳಿಸಲು ಕೆ.ಆರ್.ಐ.ಡಿ.ಎಲ್.ಸಂಸ್ಥೆ ಮತ್ತು ಮುಖ್ಯ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಅಧಿಕಾರಿಗಳು ಸಮನ್ವಯ ಸಾಧಿಸಿ **ದಿನಾಂಕ:31.03.2017ರೊಳಗೆ** ಯೋಜನೆಯನ್ನು ಅನುಷ್ಠಾನಗೊಳಿಸಲು ಎಲ್ಲಾ ಅಗತ್ಯ ಕ್ರಮಗಳನ್ನು ಕೈಗೊಂಡು ತುರ್ತಾಗಿ ಅನುಷ್ಠಾನಗೊಳಿಸುವುದು.

7. ಕೆ.ಆರ್.ಐ.ಡಿ.ಎಲ್.ಸಂಸ್ಥೆರವರು ಸದರಿ ನೀರು ಶುದ್ಧಿಕರಣ ಘಟಕಗಳನ್ನು ಅನುಷ್ಠಾನಗೊಳಿಸಿ, **ಒಂದು ವರ್ಷದವರೆಗೆ ಕಾರ್ಯಚರಣೆ ಮತ್ತು ನಿರ್ವಹಣೆಯನ್ನು (O&M) ಹಾಗೂ ವಾರ್ಷಿಕ ನಿರ್ವಹಣೆ ಗುತ್ತಿಗೆ(AMC)ಯನ್ನು** ಕೆ.ಆರ್.ಐ.ಡಿ.ಎಲ್.ಸಂಸ್ಥೆರವರು ನಿರ್ವಹಿಸುವುದು. ಈ ಸಂಬಂಧದ ವೆಚ್ಚವನ್ನು ಕೆ.ಆರ್.ಐ.ಡಿ.ಎಲ್.ಸಂಸ್ಥೆಗೆ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯಿಂದ ಭರಿಸಲಾಗುವುದು. ಇದಕ್ಕೆ ಸಂಬಂಧಪಟ್ಟ ಹೊಂದಾಣಿಕೆಯ ಮೊತ್ತದ ಪ್ರಸ್ತಾವನೆಯನ್ನು ಕೆ.ಆರ್.ಐ.ಡಿ.ಎಲ್.ಸಂಸ್ಥೆಯು ಗ್ರಾ.ಕು.ನೀ.&ನೈ.ಇಲಾಖೆರವರಿಗೆ ಸಲ್ಲಿಸಲು ಕ್ರಮವಹಿಸುವುದು

8. **ಒಂದು ವರ್ಷದ** ನಂತರ ಸದರಿ ನೀರು ಶುದ್ಧೀಕರಣ ಘಟಕಗಳನ್ನು ಸಂಬಂಧಪಟ್ಟ ಗ್ರಾಮ ಪಂಚಾಯತಿಗಳಿಗೆ ನೀರಿನ ಗುಣಮಟ್ಟದ ಪರೀಕ್ಷೆಯನ್ನು ಭಾರತೀಯ ಮಾನಕ *ISO* 10500/2012 ಪ್ರಕಾರ ಕೈಗೊಂಡು ನಂತರ **ಕಾರ್ಯಚರಣೆ ಮತ್ತು ನಿರ್ವಹಣೆಗಾಗಿ (O&M)** ಸಂಬಂಧಪಟ್ಟ ಗ್ರಾಮ ಪಂಚಾಯತಿಗೆ ಹಸ್ತಾಂತರಿಸುವುದು.

9. **ಒಂದು ವರ್ಷದ** ನಂತರ ಕೆ.ಆರ್.ಐ.ಡಿ.ಎಲ್.ಸಂಸ್ಥೆಯಿಂದ ಅನುಷ್ಠಾನಗೊಳಿಸಿರುವ ನೀರು ಶುದ್ಧಿಕರಣ ಘಟಕಗಳ ವಾರ್ಷಿಕ ನಿರ್ವಹಣೆ ಗುತ್ತಿಗೆ(AMC)ಯನ್ನು ಕೆ.ಆರ್.ಐ.ಡಿ.ಎಲ್.ಸಂಸ್ಥೆಯಿಂದ ಅಳವಡಿಸಲ್ಪಟ್ಟಿರುವ ನೀರು ಶುದ್ದೀಕರಣ ಘಟಕಗಳ ಮಾರಾಟಗಾರರೊಂದಿಗೆ ಸಂಬಂಧಪಟ್ಟ ಗ್ರಾಮ ಪಂಚಾಯತ್‌ನ ಪಂಚಾಯತ್ ಅಭಿವೃದ್ಧಿ ಅಧಿಕಾರಿ(PDO)ರವರು ಮೇಲೆ (6)ರಲ್ಲಿ ಓದಲಾದ ಸರ್ಕಾರದ ಪತ್ರದಲ್ಲಿನ ಮಾರ್ಗಸೂಚಿ ಹಾಗೂ ದರಗಳನ್ವಯ ಕರಾರು ಮಾಡಿಕೊಳ್ಳಲು ಗ್ರಾಮ ಪಂಚಾಯತ್ ಕ್ರಮವಹಿಸುವುದು.

10. ಸದರಿ ನೀರು ಶುದ್ಧೀಕರಣ ಘಟಕಗಳನ್ನು ಅನುಷ್ಠಾನಗೊಳಿಸುವ ಕಾಮಗಾರಿಯ ಪ್ರಗತಿ ವರದಿಯನ್ನು ಸಂಬಂಧಪಟ್ಟ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಮತ್ತು ಕಾರ್ಯಪಾಲಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ ಇವರಿಗೆ 15 ದಿನಕ್ಕೊಮ್ಮೆ ಕಡ್ಡಾಯವಾಗಿ ಸಲ್ಲಿಸುವುದು.

11. 2014-15ನೇ ಸಾಲಿನಲ್ಲಿ ಎಸ್.ಸಿ.ಪಿ. ಅನುದಾನದಡಿ ಹಾಗೂ ಟಿ.ಎಸ್.ಪಿ. ಅನುದಾನದಡಿ ಬಳಕೆಯಾಗದೇ ಉಳಿದಿರುವ ಒಟ್ಟು **ರೂ.294.11 ಕೋಟಿಗಳ** ಅನುದಾನದ ಪೈಕಿ SCP ಅನುದಾನದಲ್ಲಿ **68.00ಕೋಟಿಗಳನ್ನು** ಹಾಗೂ TSP ಅನುದಾನದಲ್ಲಿ **25.09ಕೋಟಿಗಳನ್ನು** ರಾಜ್ಯದ ಗ್ರಾಮೀಣ ಜನವಸತಿಗಳಲ್ಲಿನ ಕಡ್ಡಾಯವಾಗಿ **SC Colony** ಗಳಲ್ಲಿ ಮತ್ತು

ಕಡ್ಡಾಯವಾಗಿ **ST Colony** ಗಳಲ್ಲಿ ನೀರು ಶುದ್ಧೀಕರಣ ಘಟಕಗಳನ್ನು ಅನುಷ್ಠಾನಗೊಳಿಸಲು ಸಂಪೂರ್ಣ ಅನುದಾನವನ್ನು ಮುಂಗಡವಾಗಿ ಗ್ರಾ.ಕು.ನೀ.&ನೈ.ಇಲಾಖೆಯಿಂದ ನೇರವಾಗಿ ಕೆ.ಆರ್.ಐ.ಡಿ.ಎಲ್.ಸಂಸ್ಥೆಗೆ ಬಿಡುಗಡೆ ಮಾಡಲು ಕ್ರಮವಹಿಸುವುದು. ಸದರಿ ನೀರು ಶುದ್ಧೀಕರಣ ಘಟಕಗಳ ಅನುಷ್ಠಾನಕ್ಕೆ ತಗಲುವ ವೆಚ್ಚವನ್ನು ಪರಿಗಣಿಸಿದ ಈ ಮೊತ್ತದಲ್ಲಿ ಅನುಷ್ಠಾನ ಮಾಡಲು ಸಂಭವನೀಯ ನೀರು ಶುದ್ಧೀಕರಣ ಘಟಕಗಳ ಸಂಖ್ಯೆಯೊಂದಿಗೆ ಕೆ.ಆರ್.ಐ.ಡಿ.ಎಲ್.ಸಂಸ್ಥೆಯು ಅಂದಾಜು ವೆಚ್ಚ (Estimated cost) ತಯಾರಿಸಿ, ಗ್ರಾ.ಕು.ನೀ.&ನೈ.ಇಲಾಖೆಯಿಂದ ಅನುಮೋದನೆ ಪಡೆಯುವುದು ಹಾಗೂ ಕೆ.ಆರ್.ಐ.ಡಿ.ಎಲ್.ಸಂಸ್ಥೆರವರು ಕ್ಷೇತ್ರಮಟ್ಟದಲ್ಲಿ ನೀರು ಶುದ್ಧೀಕರಣ ಘಟಕಗಳನ್ನು ಅಳವಡಿಸಲು ಎಲ್ಲಾ ಅಗತ್ಯ ಕ್ರಮಗಳನ್ನು ಕೈಗೊಂಡು ತುರ್ತಾಗಿ ಅನುಷ್ಠಾನಗೊಳಿಸುವುದು.

12. ಕೆ.ಆರ್.ಐ.ಡಿ.ಎಲ್.ಸಂಸ್ಥೆಯು ನೀರು ಶುದ್ಧೀಕರಣ ಘಟಕಗಳ ಅನುಷ್ಠಾನದ ಭೌತಿಕ ಮತ್ತು ಆರ್ಥಿಕ ಪ್ರಗತಿ ವಿವರಗಳನ್ನು ***IMIS***ನಲ್ಲಿ ದಾಖಲಿಸಲು ಸಂಬಂಧಪಟ್ಟ ಕಾರ್ಯಪಾಲಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗರವರಿಗೆ ಒದಗಿಸುವುದು ಹಾಗೂ ಸದರಿ ವಿವರಗಳನ್ನು ಆಯಾ ಕಾರ್ಯಪಾಲಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದವರು ***IMIS***ನಲ್ಲಿ ದಾಖಲಿಸಲು ಕ್ರಮವಹಿಸುವುದು. ಮುಂದುವರೆದು, ಸದರಿ ಮಾಹಿತಿಯನ್ನು ಕೆ.ಆರ್.ಐ.ಡಿ.ಎಲ್.ಸಂಸ್ಥೆಯವರು ಕಡ್ಡಾಯವಾಗಿ **ಗಾಂಧಿಸಾಕ್ಷಿ ಕಾಯಕ ತಂತ್ರಾಂಶದಲ್ಲಿ** ಅಳವಡಿಸಲು ಕ್ರಮವಹಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಹೆಚ್.ಪಿ. ಪ್ರಕಾಶ್)**
ಆಯುಕ್ತರು ಹಾಗೂ
ಸರ್ಕಾರದ ಪದನಿಮಿತ್ತ ಕಾರ್ಯದರ್ಶಿ,
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು-1) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು-2) ಕರ್ನಾಟಕ, ಬೆಂಗಳೂರು.
4. ಉಪ ಮಹಾಲೇಖಪಾಲರು, ಮಹಾಲೇಖಪಾಲರು(ಎಯು-1)ರವರ ಶಾಖಾ ಕಛೇರಿ, ಕಾಲೇಜುರಸ್ತೆ, ಧಾರವಾಡ.
5. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು-1.
6. ಸರ್ಕಾರದ ಅಪರ ಮುಖ್ಯಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು-1.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು-1.
8. ವಿಶೇಷಾಧಿಕಾರಿಗಳು(ಜಿಪಂ) ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು-1.
9. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು-1.
10. ಮುಖ್ಯ ಇಂಜನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, 1ನೇ ಮಹಡಿ, 'E' Block, K.H.B Complex, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-09.
11. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಗಮ, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ವೃತ್ತ, ಬೆಂಗಳೂರು-09.
12. ಮುಖ್ಯ ಲೆಕ್ಕಾಧಿಕಾರಿಗಳು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, 2ನೇ ಮಹಡಿ, 'E' Block, K.H.B Complex, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-09.
13. ರಾಜ್ಯದ ಎಲ್ಲಾ (30) ಜಿಲ್ಲೆಗಳ ಜಿಲ್ಲಾಧಿಕಾರಿಗಳು.
14. ರಾಜ್ಯದ ಎಲ್ಲಾ (30) ಜಿಲ್ಲಾ ಪಂಚಾಯತ್‌ಗಳ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು / ಮುಖ್ಯ ಲೆಕ್ಕಾಧಿಕಾರಿಗಳು.
15. ರಾಜ್ಯದ ಎಲ್ಲಾ (4) ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವೃತ್ತಗಳ ಅಧೀಕ್ಷಕ ಅಭಿಯಂತರರು,
16. ರಾಜ್ಯದ ಎಲ್ಲಾ (30) ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗಗಳ ಕಾರ್ಯಪಾಲಕ ಇಂಜನಿಯರ್‌ಗಳು.
17. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ ಇಲಾಖೆ, ಬೆಂಗಳೂರು,
18. ಉಪ ನಿರ್ದೇಶಕರು, ನೆಟ್ ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ನಂ.49, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
19. ಜಿಲ್ಲಾ ಖಜಾನಾಧಿಕಾರಿಗಳು, ಬೆಂಗಳೂರು.
20. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್ ಸಾಬ್‌ರವರ ಗ್ರಾಮೀಣಾಭಿವೃದ್ಧಿರಾಜ್ಯ ಸಂಸ್ಥೆ, ಲಲಿತ್ ಮಹಲ್‌ರಸ್ತೆ, ಮೈಸೂರು.
21. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ (ಪಂ.ರಾಜ್) ಇವರ ಆಪ್ತ ಕಾರ್ಯದರ್ಶಿ.
22. ಆಯುಕ್ತರು ಮತ್ತು ಪದನಿಮಿತ್ತ ಸರ್ಕಾರದ ಅಪರ ಕಾರ್ಯದರ್ಶಿಗಳು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, 2ನೇ ಮಹಡಿ, 'E' Block, K.H.B complex, ಕಾವೇರಿ ಭವನ, ಕೆ.ಜಿರಸ್ತೆ, ಬೆಂಗಳೂರು-560009ರವರ ಆಪ್ತ ಕಾರ್ಯದರ್ಶಿ.
23. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರುರವರ ಆಪ್ತ ಕಾರ್ಯದರ್ಶಿ.
24. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್‌ಇಲಾಖೆರವರ ಆಪ್ತ ಸಹಾಯಕರು.
25. ಸಂಪಾದಕರು, ಕರ್ನಾಟಕ ವಿಕಾಸ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ನಂ.309, 3ನೇ ಮಹಡಿ, ಗೇಟ್ ನಂ.1, ಬಹುಮಹಡಿಗಳ ಕಟ್ಟಡ, ಅಂಬೇಡ್ಕರ್ ವೀಧಿ, ಬೆಂಗಳೂರು-560001.
26. ಗ್ರಾ.ಅ.ಪಂ.ರಾಜ್ ಇಲಾಖೆಯ ಮಾಹಿತಿ ಕೇಂದ್ರ-(10ಪ್ರತಿಗಳು).
27. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾ.ಅ.&ಪಂ.ರಾಜ್ ಇಲಾಖೆ (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು)
28. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ)
29. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

ಅನುಬಂಧ-1

ಸರ್ಕಾರದ ಆದೇಶ ಸಂಖ್ಯೆ: RDP/1213/RDW&SD/2016-17, ದಿನಾಂಕ:06.01.2017ರ ಲಗತ್ತು :

SCP & TSP ಅನುದಾನದಲ್ಲಿ ರಾಜ್ಯದ ಗ್ರಾಮೀಣ ಜನವಸತಿಗಳಲ್ಲಿನ SC & ST Colony ಗಳಲ್ಲಿ ನೀರು ಶುದ್ಧೀಕರಣ ಘಟಕಗಳನ್ನು ಅಳವಡಿಸುವ ಗ್ರಾಮಗಳ ಪಟ್ಟಿ :

| Sno | District | Space avilable in SC Colony for WPP Installation | Space avilable in ST Colony for WPP Installation | Space avilable in SC & ST Colony for WPP Installation | Total *(2+3+4)* |
|---|---|---|---|---|---|
| | 1 | 2 | 3 | 4 | 5 |
| 1 | Bagalkote | 17 | 0 | 5 | 22 |
| 2 | Bangalore (R) | 11 | 0 | 2 | 13 |
| 3 | Bangalore (U) | 17 | 0 | 3 | 20 |
| 4 | Belagavi | 43 | 8 | 56 | 107 |
| 5 | Bellary | 8 | 5 | 16 | 29 |
| 6 | Bidar | 18 | 9 | 34 | 61 |
| 7 | Chamarajanagara | 27 | 7 | 10 | 44 |
| 8 | Chikkaballapura | 21 | 7 | 0 | 28 |
| 9 | Chikkamagalur | 2 | 0 | 2 | 4 |
| 10 | Chitradurga | 27 | 22 | 4 | 53 |
| 11 | Davanagere | 3 | 3 | 22 | 28 |
| 12 | D'Kannada | 39 | 2 | 27 | 68 |
| 13 | Gadag | 0 | 0 | 30 | 30 |
| 14 | Gulbarga | 74 | 0 | 50 | 124 |
| 15 | Hassan | 21 | 2 | 0 | 23 |
| 16 | Haveri | 24 | 6 | 1 | 31 |
| 17 | Kodagu | 10 | 0 | 1 | 11 |
| 18 | Mandya | 34 | 3 | 0 | 37 |
| 19 | Mysore | 21 | 8 | 20 | 49 |
| 20 | Raichur | 26 | 12 | 6 | 44 |
| 21 | Ramanagara | 23 | 0 | 0 | 23 |
| 22 | Shivamogga | 29 | 8 | 24 | 61 |
| 23 | Tumkur | 26 | 3 | 19 | 48 |
| 24 | Udupi | 24 | 9 | 8 | 41 |
| 25 | U'Kannada | 50 | 0 | 0 | 50 |
| 26 | Vijayapura | 27 | 0 | 17 | 44 |
| 27 | Yadgiri | 25 | 11 | 0 | 36 |
| | **Total :** | **647** | **125** | **357** | **1129** |

(ಹೆಚ್.ಪಿ. ಪ್ರಕಾಶ್)
ಆಯುಕ್ತರು ಹಾಗೂ
ಸರ್ಕಾರದ ಪದನಿಮಿತ್ತ ಕಾರ್ಯದರ್ಶಿ,
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ